# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರ ಕಛೇರಿ ಕೆಂಪೇಗೌಡನಗರ ಉಪವಿಭಾಗ,**
**ಬೃ.ಬೆಂ.ಮ.ಪಾಲಿಕೆ ಹೆಚ್. ಸಿದ್ದಯ್ಯ ರಸ್ತೆ, ಬೆಂಗಳೂರು**

ಸಂಖ್ಯೆ:ಸ.ಇಂ/ವಾ–118/ವಾರ್ಡ್‌ಸಭೆ/2022–23 ದಿನಾಂಕ: 4/6/22

## ವಾರ್ಡ್ –118ರ ವಾರ್ಡ್ ಸಭೆಯ ನಡವಳಿ

ದಿನಾಂಕ:04–06–2022 ರಂದು ಕೆಂಪೇಗೌಡನಗರ ಉಪವಿಭಾಗ ವಾರ್ಡ್–118ರ ವಾರ್ಡ್ ಕಛೇರಿಯಲ್ಲಿ ಡಾ!!. ಮಂಜುನಾಥ್ ಶಿಂಧೆ ಉಪ ನಿರ್ದೇಶಕರು ಪಶುಪಾಲನೆ ವಾರ್ಡ್–118 ರ ನೋಡಲ್ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ ನಡೆದ ವಾರ್ಡ್ ಸಮಿತಿ ಸಭಾ ನಡವಳಿಗಳು.

**ಹಾಜರಿದವರು:–**

| ಕ್ರ ಸಂ. | ಹೆಸರು | ಹುದ್ದೆ | ಮೊಬೈಲ್ ಸಂಖ್ಯೆ |
|---|---|---|---|
| 1 | ಡಾ!!. ಮಂಜುನಾಥ್ ಶಿಂಧೆ | ನೋಡಲ್ ಅಧಿಕಾರಿಗಳು | 9480685206 |
| 2 | ಶ್ರೀ.ಕೆ.ಎಸ್.ವಿಜಯ್‌ಕುಮಾರ್ | ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರು ವಾರ್ಡ್ ಸಂಖ್ಯೆ:118 | 9480688118 |
| 3 | ಶ್ರೀ.ಆರ್.ವೀರಯ್ಯ | ಕಿರಿಯ ಆರೋಗ್ಯ ಪರಿವೀಕ್ಷಕರು | 9844859560 |
| 4 | ಶ್ರೀ.ಎಂ.ಸುರೇಂದ್ರ | ಟಿ.ಐ ಸಹಾಯಕ ಕಂದಾಯ ಅಧಿಕಾರಿ (ಮಾರುಕಟ್ಟೆ–ದಕ್ಷಿಣ) | 8904288845 |
| 5 | ಶ್ರೀ.ಆನಂದ್ | ಕಂದಾಯ ಇಲಾಖೆ | |
| 6 | ಶ್ರೀ.ಅರವಿಂದ | ಬಿ.ಡಬ್ಲ್ಯೂ.ಎಸ್.ಎಸ್.ಬಿ | |
| 7 | ಶ್ರೀ.ಕಮಲನಾಥ್ | ಸ್ಥಳೀಯರು | 7975774805 |
| 8 | ಶ್ರೀ.ಶ್ರೀನಿವಾಸ | ಸ್ಥಳೀಯರು | 9343381555 |
| 9 | ಶ್ರೀ.ರಾಜ | ಸ್ಥಳೀಯರು | |

ಮಾನ್ಯ ಅಧ್ಯಕ್ಷರು, ಮೇಲ್ಕಂಡ ಎಲ್ಲರನ್ನು ಸ್ವಾಗತದೊಂದಿಗೆ ಪರಸ್ಪರ ಪರಿಚಯ ಮಾಡಿಕೊಳ್ಳಲು ತಿಳಿಸುತ್ತಾ ಸಭೆಯನ್ನು ಪ್ರಾರಂಭಿಸಲಾಯಿತು.

## ಚರ್ಚಿಸಲಾದ ವಿಷಯಗಳು:–

ಹಿಂದಿನ ಸಭೆಯ ವಿಷಯದ ಬಗ್ಗೆ ಚರ್ಚಿಸಲಾಗಿ ಸಭೆಯನ್ನು ಪ್ರಾರಂಭಿಸಲಾಗಿದ್ದು, ನಂತರದಲ್ಲಿ ಕಾಮಗಾರಿ ವಿಷಯವಾಗಿ ಚರ್ಚಿಸಲಾಗಿದ್ದು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ 2022–23ನೇ ಸಾಲಿನ ಆಯವ್ಯಯದಲ್ಲಿ ವಾರ್ಡ್ ಸಂಖ್ಯೆ 118 ರಲ್ಲಿನ ಚರಂಡಿ ಹಾಗೂ ಪಾದಚಾರಿ ಮಾರ್ಗಗಳ

ದುರಸ್ಥಿಗಾಗಿ ಹಾಗೂ ವಾರ್ಷಿಕ ನಿರ್ವಹಣೆಗಾಗಿ ಅಂದಾಜು ಪಟ್ಟಿಯನ್ನು ಸಲ್ಲಿಸಿರುವುದಾಗಿ ತಿಳಿಸಿರುತ್ತಾರೆ. ವಿನೋಭನಗರ 1ನೇ, 2ನೇ, 3ನೇ ಅಡ್ಡರಸ್ತೆಗಳಲ್ಲಿ ಒಳಚರಂಡಿ ಕೊಳವೆಯನ್ನು ಅಳವಡಿಸಲು ರಸ್ತೆಯನ್ನು ಅಗೆದಿರುವ ಡ್ರಬೀಸ್ ಅನ್ನು ತೆರವುಗೊಳಿಸಲಾಗಿರುತ್ತದೆ ಬಿ.ಡಬ್ಲೂ.ಎಸ್.ಎಸ್.ಬಿ ಇಲಾಖೆಯವರು ಸಭೆಯಲ್ಲಿ ತಿಳಿಸಿರುತ್ತಾರೆ.

ಮುಂದುವರೆದು ಘನತ್ಯಾಜ್ಯ ಕಿರಿಯ ಆರೋಗ್ಯ ಪರಿವೀಕ್ಷಕರು ರವರು ಮಾತನಾಡಿ ವಾರ್ಡ್ ಸಂಖ್ಯೆ: 118ರ ಎಲ್ಲಾ ರಸ್ತೆಗಳಲ್ಲಿ ಘನತ್ಯಾಜ್ಯ ನಿರ್ವಹಣೆಯು ಯಾವುದೇ ತೊಂದರೆ ಇಲ್ಲದೇ ನಿರ್ವಹಿಸುತ್ತಿರುತ್ತೇವೆ ಎಂದು ತಿಳಿಸಿರುತ್ತಾರೆ. ಪ್ರತಿ 1ನೇ ಹಾಗೂ 3ನೇ ಶನಿವಾರದಂದು ಒಂದೇ ಸಮಯದಲ್ಲಿ ದಕ್ಷಿಣ ವಲಯದ ಎಲ್ಲಾ ವಾರ್ಡ್‌ಗಳಲ್ಲಿ ವಾರ್ಡ್ ಸಮಿತಿ ಸಭೆಗಳನ್ನು ನಡೆಸುತ್ತಿರುವುದರಿಂದ ಬೇರೆ ಇಲಾಖೆ ಹಾಗೂ ಬಿಬಿಎಂಪಿ ಅಧಿಕಾರಿಗಳಿಗೆ ಸಭೆ ಹಾಜರಾಗಲು ಸಾಧ್ಯವಾಗದ ಕಾರಣ ಸಭೆಯ ವಾರ ಹಾಗೂ ಸಮಯದಲ್ಲಿ ಬದಲಾಯಿಸಬೇಕೆಂದು ಅಭಿಪ್ರಾಯವನ್ನು ವ್ಯಕ್ತಪಡಿಸಿರುತ್ತಾರೆ. ಸಾರ್ವಜನಿಕರಿಂದ ಯಾವುದೇ ದೂರುಗಳು ಈ ಸಭೆಯಲ್ಲಿ ಬಂದಿರುವುದಿಲ್ಲ.

ಅಂತಿಮವಾಗಿ ಅಧ್ಯಕ್ಷರು ಮಾತನಾಡಿ ಮಳೆ ಹೆಚ್ಚಾಗಿರುವುದರಿಂದ ದೂರುಗಳನ್ನು ಕೂಡಲೇ ಸ್ಪಂದಿಸಬೇಕೆಂದು ತಿಳಿಸಿರುತ್ತಾರೆ ಹಾಗೂ ಮುಂದಿನ ಸಭೆಗೆ ಕಡ್ಡಾಯವಾಗಿ ಎಲ್ಲಾ ಅಧಿಕಾರಿಗಳಿಗೆ ವಾರ್ಡ್ ಸಮಿತಿ ಸಭೆಗೆ ಸಮಯಕ್ಕೆ ಸರಿಯಾಗಿ ಹಾಜರಾಗುವಂತೆ ಸೂಚಿಸಿ, ತಪ್ಪಿದಲ್ಲಿ ಹಾಜರಾಗದ ಅಧಿಕಾರಿಗಳಿಗೆ ನೋಟೀಸ್ ಜಾರಿ ಮಾಡಲು ತಿಳಿಸಿರುತ್ತಾರೆ. ಹಾಜರಿದ್ದ ಅಧಿಕಾರಿಗಳಿಗೆ ಸಮನ್ವಯ ಸಾಧಿಸಿಕೊಂಡು ಸಕಾಲದಲ್ಲಿ ಸಾರ್ವಜನಿಕರ ಕುಂದುಕೊರತೆಗಳಿಗೆ ಸ್ಪಂದಿಸಿ ಪರಿಹರಿಸಲು ಸಹಕಾರ ನೀಡುವಂತೆ ಕೋರುತ್ತಾ, ಸಭೆಗೆ ಹಾಜರಿದ್ದ ಎಲ್ಲಾರಿಗೂ ವಂದನೆಗಳನ್ನು ಅರ್ಪಿಸುತ್ತಾ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

4/6/22
ಕಾರ್ಯದರ್ಶಿಗಳು ಹಾಗೂ
ಸಹಾಯಕ ಅಭಿಯಂತರರು
ವಾರ್ಡ್ –118 ಸುಧಾಮನಗರ

ನೋಡಲ್ ಅಧಿಕಾರಿಗಳು 4/6/22
ವಾರ್ಡ್ ಸಂಖ್ಯೆ: 118